प्रेस प्रकाशनी PRESS RELEASE

भारतीय रिज़र्व बैंक
RESERVE BANK OF INDIA

वेबसाइट : www.rbi.org.in/hindi
Website : www.rbi.org.in
ई-मेल/email : helpdoc@rbi.org.in

**संचार विभाग,** केंद्रीय कार्यालय, शहीद भगत सिंह मार्ग, फोर्ट, मुंबई - 400 001
**Department of Communication**, Central Office, Shahid Bhagat Singh Marg, Fort, Mumbai - 400 001 फोन/Phone: 022 - 2266 0502

24 ನವೆಂಬರ್ 2025

**ತುಮಕೂರು ಗ್ರೇನ್ ಮರ್ಚನ್ಟ್ಸ್ ಕೋ- ಆಪರೇಟಿವ್ ಬ್ಯಾಂಕ್ ಲಿಮಿಟೆಡ್, ಕರ್ನಾಟಕ - ಈ ಬ್ಯಾಂಕಿಗೆ ಆರ್ ಬಿ ಐ ವಿತ್ತೀಯ ದಂಡ ವಿಧಿಸಿದೆ.**

ಭಾರತೀಯ ರಿಸರ್ವ್ ಬ್ಯಾಂಕ್ (ಆರ್ ಬಿ ಐ) ತನ್ನ ನವೆಂಬರ್ 20, 2025 ರ ಆದೇಶದ ಮೂಲಕ ಮೇಲ್ವಿಚಾರಣಾ ಕ್ರಿಯಾ ಚೌಕಟ್ಟು (SAF) ಅಡಿಯಲ್ಲಿ ಆರ್ ಬಿ ಐ ನೀಡಿದ್ದ ನಿರ್ದಿಷ್ಟ ನಿರ್ದೇಶನಗಳ ಅನುಪಾಲನೆ ಮಾಡದೇ ಇದ್ದುದಕ್ಕಾಗಿ ತುಮಕೂರು ಗ್ರೇನ್ ಮರ್ಚನ್ಟ್ಸ್ ಕೋ- ಆಪರೇಟಿವ್ ಬ್ಯಾಂಕ್ ಲಿಮಿಟೆಡ್, ಕರ್ನಾಟಕ - ಈ ಬ್ಯಾಂಕಿಗೆ (ಬ್ಯಾಂಕು) ರೂ. 1 ಲಕ್ಷ (ರೂ. ಒಂದು ಲಕ್ಷ ಮಾತ್ರ) ವಿತ್ತೀಯ ದಂಡ ವಿಧಿಸಿದೆ. ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮ 1949 ರ ಕಲಂ 47 ಎ(1)(ಸಿ) ಜೊತೆ ಓದಲಾದ ಕಲಂ 46(4) (i) ಮತ್ತು 56 ರ ಅಡಿಯಲ್ಲಿ ಭಾರತೀಯ ರಿಸರ್ವ್ ಬ್ಯಾಂಕ್ ಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ದಂಡವನ್ನು ವಿಧಿಸಿದೆ.

ಮಾರ್ಚ್ 31,2024 ರಂದು ಇದ್ದ ಬ್ಯಾಂಕಿನ ಆರ್ಥಿಕ ಪರಿಸ್ಥಿತಿ ಯನ್ನು ಆಧರಿಸಿ ಬ್ಯಾಂಕಿನ ಶಾಸನಬದ್ಧ ನಿರೀಕ್ಷಣೆಯನ್ನು ಭಾರತೀಯ ರಿಸರ್ವ್ ಬ್ಯಾಂಕ್ ಮಾಡಿತ್ತು. ಭಾರತೀಯ ರಿಸರ್ವ್ ಬ್ಯಾಂಕ್ ನೀಡಿದ ನಿರ್ದೇಶನಗಳ ಅನುಪಾಲನೆ ಆಗದೆ ಇರುವ ಬಗ್ಗೆ ನಿರೀಕ್ಷಣಾ ನಿಷ್ಕರ್ಷೆಯನ್ನು ಮತ್ತು ಈ ಸಂಬಂಧ ನಡೆದ ಪತ್ರ ವ್ಯವಹಾರಗಳನ್ನು ಆಧರಿಸಿ ಬ್ಯಾಂಕಿಗೆ ಮೇಲೆ ಹೇಳಿದ ನಿರ್ದೇಶನಗಳ ಅನುಪಾಲನೆ ಮಾಡುವಲ್ಲಿ ವಿಫಲವಾದುದಕ್ಕಾಗಿ ಏಕೆ ದಂಡ ವಿಧಿಸಬಾರದು ಎಂದು ಕಾರಣ ಕೇಳಿ ನೋಟೀಸನ್ನು ನೀಡಲಾಗಿತ್ತು. ಬ್ಯಾಂಕು ಈ ಕುರಿತು ಸಲ್ಲಿಸಿದ ಉತ್ತರ ಮತ್ತು ವೈಯಕ್ತಿಕ ವಿಚಾರಣೆಯಲ್ಲಿ ಮಾಡಲಾದ ಮೌಖಿಕ ನಿವೇದನೆಗಳನ್ನು ಪರಿಗಣಿಸಿದ ನಂತರ ಭಾರತೀಯ ರಿಸರ್ವ್ ಬ್ಯಾಂಕಿಗೆ, ಇತರ ವಿಷಯಗಳ ನಡುವೆ, ಬ್ಯಾಂಕಿನ ವಿರುದ್ಧ ಮಾಡಲಾದ ಈ ಕೆಳಗಿನ ಆರೋಪ ಸ್ಥಿರಪಟ್ಟಿದೆ ಮತ್ತು ವಿತ್ತೀಯ ದಂಡ ವಿಧಿಸುವುದಕ್ಕೆ ಅರ್ಹವಾಗಿವೆ ಎಂದು ಗೊತ್ತಾಯಿತು:

ಮೇಲ್ವಿಚಾರಣಾ ಕ್ರಿಯಾ ಚೌಕಟ್ಟಿನ ಅಡಿಯಲ್ಲಿ ನೀಡಿದ ನಿರ್ದೇಶನಗಳ ಅನುಸರಣೆ ಮಾಡದೇ, ಬ್ಯಾಂಕು-

**i.** ಅಪಾಯ-ತೂಕ 100% ಗಿಂತ ಹೆಚ್ಚಾಗಿರುವ ಹೊಸ ಸಾಲ ಮತ್ತು ಮುಂಗಡಗಳನ್ನು ಮಂಜೂರು ಮಾಡಿತ್ತು;

ii. ಭಾರತೀಯ ಸ್ಟೇಟ್ ಬ್ಯಾಂಕು ನೀಡಿದ್ದಕ್ಕಿಂತ ಹೆಚ್ಚಿನ ಬಡ್ಡಿ ದರಗಳನ್ನು ನಿಶ್ಚಿತ ಠೇವಣಿಗಳ ಮೇಲೆ ನೀಡಿತ್ತು; ಮತ್ತು

iii. ಹೆಚ್ಚಿನ ಮಟ್ಟದ ನಿಷ್ಕ್ರಿಯ ಆಸ್ತಿ(NPA)/ ಮರುಪಾವತಿ ವೈಫಲ್ಯದ (default) ವಲಯಕ್ಕೆ ಉದರಿ (ಕ್ರೆಡಿಟ್) ಸೌಲಭ್ಯಗಳನ್ನು ಮಂಜೂರು/ನವೀಕರಣ ಮಾಡಿತ್ತು.

ನಿಯಂತ್ರಣ ಅನುಪಾಲನೆಯಲ್ಲಿ ಕಂಡುಬಂದ ಕೊರತೆಗಾಗಿ ಮೇಲಿನ ಕ್ರಮವನ್ನು ತೆಗೆದುಕೊಳ್ಳಲಾಗಿದೆಯೇ ವಿನಃ ಇದು ಬ್ಯಾಂಕು ತನ್ನ ಗ್ರಾಹಕರೊಂದಿಗೆ ಮಾಡಿಕೊಂಡ ಯಾವುದೇ ವ್ಯವಹಾರ ಅಥವಾ ಒಪ್ಪಂದದ ಸಿಂಧುತ್ವದ ಬಗೆಗಿನ ಘೋಷಣೆಯಲ್ಲ. ಅಲ್ಲದೆ, ಈ ವಿತ್ತೀಯ ದಂಡ ವಿಧಿಸುವ ಕ್ರಿಯೆಯು ಭಾರತೀಯ ರಿಸರ್ವ್ ಬ್ಯಾಂಕು ಈ ಬ್ಯಾಂಕಿನ ಮೇಲೆ ತೆಗೆದುಕೊಳ್ಳಬಹುದಾದ ಯಾವುದೇ ಇತರ ಕ್ರಮದ ಪೂರ್ವಾಗ್ರಹದಿಂದ ಹೊರತಾಗಿದೆ.

**(ಬ್ರಿಜ್ ರಾಜ್)**
ಚೀಫ್ ಜನರಲ್ ಮ್ಯಾನೇಜರ್

**ಪತ್ರಿಕಾ ಪ್ರಕಟಣೆ: 2025-2026/1558**